ದಿನಾಂಕ 18-06-2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ : ವಾದಿ ಪರ ಶ್ರೀ. ಎಂ.ಎ.ಹೆಚ್. ವಕೀಲರಿಂದ

ನನ್ನ ಮುಖ್ಯ ವಿಚಾರಣೆ ಭಾಗವಾಗಿ ಪ್ರಮಾಣ ಪತ್ರದ ಮೂಲಕ ನ್ಯಾಯಾಲಯದ ಮುಂದೆ ಸಲ್ಲಿಸಿರುತ್ತೇನೆ. ಸದರಿ, ಪ್ರಮಾಣ ಪತ್ರದಲ್ಲಿ ಬರೆದಿರುವ ವಿಷಯಗಳು ನಾನೇ ಬರೆಸಿರುತ್ತೇನೆ. ನನ್ನ ಪ್ರಮಾಣ ಪತ್ರದಲ್ಲಿ ಹೇಳಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ. ಅದರಲ್ಲಿರುವ ಸಹಿ ನನ್ನದೇ. ನನ್ನ ದಾವೆಗೆ ಪೂರಕವಾಗಿ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ, ಅವುಗಳನ್ನು ಗುರುತಿಸುವಂತೆ ಕೋರುತ್ತೇನೆ.

1. ಖರೀದಿ ಪತ್ರದ ದೃಢೀಕೃತ ನಕಲು ಹಾಜರುಪಡಿಸಿರುತ್ತೇನೆ. ಅದನ್ನು ನಿ.ಪಿ. 10 ಎಂದು ಗುರುತಿಸಲಾಯಿತು.

2. 7 ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ಕ್ರಮವಾಗಿ ನಿ.ಪಿ. 11 ರಿಂದ 17 ಎಂದು ಗುರುತಿಸಲಾಯಿತು.

ಈ ಹಂತದಲ್ಲಿ ಶ್ರೀ. ಎಂ.ಎ.ಹೆಚ್. ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಕಾಲಾವಕಾಶ ಕೋರಿರುತ್ತಾರೆ, ಮುಂದೂಡಲಾಯಿತು.

(ನನ್ನ ಉಕ್ತದ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿರುತ್ತಾರೆ)

ಓ. ಹೇ. ಕೇ. ಸರಿ ಇದೆ,

**ಸಿಜೆ** & ಜೆಎಂಎಫ್‌ಸಿ, ನ್ಯಾಯಾಲಯ, ಮಾನವಿ.